# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಜಿಲ್ಲೆಗಳ ಪುನರ್ ವಿಂಗಡಣೆ ಹೊಸ ಜಿಲ್ಲೆಗಳ ರಚನೆ ಸಂಬಂಧ ಜಿಲ್ಲಾ ಪುನರ್ ವಿಂಗಡಣಾ ಸಮಿತಿಯನ್ನು ರಚಿಸುವ ಬಗ್ಗೆ.

* * *

**ಪ್ರಸ್ತಾವನೆ:**

ರಾಜ್ಯದ ಜಿಲ್ಲೆಗಳ ಪುನರ್ ವಿಂಗಡಣೆ ಬಗ್ಗೆ ಪರಿಶೀಲಿಸಿ ವರದಿ ನೀಡಲು ಸರ್ಕಾರವು ಈ ಹಿಂದೆ ಶ್ರೀ ವಾಸುದೇವರಾವ್ ಆಯೋಗ, ಶ್ರೀ ಟಿ.ಎಂ.ಹುಂಡೇಕರ್ ಸಮಿತಿ, ಶ್ರೀ ಪಿ.ಸಿ.ಗದ್ದಿಗೌಡರ್ ಸಮಿತಿಗಳನ್ನು ಅನುಕ್ರಮವಾಗಿ 1973, 1984 ಮತ್ತು 1986 ನೇ ಸಾಲಿನಲ್ಲಿ ನೇಮಕ ಮಾಡಿತ್ತು. ಈ ಸಮಿತಿಗಳು ಹೊಸದಾಗಿ 10 ಜಿಲ್ಲೆಗಳನ್ನು ರಚಿಸಲು ಸೂಚಿಸಿದ್ದು, ಅವುಗಳಲ್ಲಿ ಈಗಾಗಲೇ 1)ಬೆಂಗಳೂರು ನಗರ ಜಿಲ್ಲೆ 2)ದಾವಣಗೆರೆ 3)ಬಾಗಲಕೋಟೆ 4)ಗದಗ್ 5)ಹಾವೇರಿ 6)ಕೊಪ್ಪಳ 7)ಚಾಮರಾಜನಗರ ಮತ್ತು 8)ಉಡುಪಿ ಜಿಲ್ಲೆಗಳನ್ನು ರಚಿಸಲಾಗಿದೆ.

ಪ್ರಸ್ತುತ ಬೆಂಗಳೂರು ಗ್ರಾಮಾಂತರ ಜಿಲ್ಲೆಯನ್ನು ಪುನರ್ವಿಂಗಡಿಸಿ ಕನಕಪುರ, ಚನ್ನಪಟ್ಟಣ, ರಾಮನಗರ ಮತ್ತು ಮಾಗಡಿ ತಾಲ್ಲೂಕುಗಳನ್ನೊಳಗೊಂಡ ರಾಮನಗರ ಜಿಲ್ಲೆಯನ್ನಾಗಿಯೂ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಯನ್ನು ನೆಲಮಂಗಲ, ದೊಡ್ಡಬಳ್ಳಾಪುರ, ದೇವನಹಳ್ಳಿ ಹಾಗೂ ಹೊಸಕೋಟೆ ತಾಲ್ಲೂಕುಗಳಿಗೆ ಸೀಮಿತಗೊಳಿಸಲು; ಹಾಗೂ ಕೋಲಾರ ಜಿಲ್ಲೆಯನ್ನು ಪುನರ್ವಿಂಗಡಿಸಿ, ಗೌರಿಬಿದನೂರು, ಶಿಡ್ಲಘಟ್ಟ, ಬಾಗೇಪಲ್ಲಿ, ಚಿಕ್ಕಬಳ್ಳಾಪುರ ಹಾಗೂ ಗುಡಿಬಂಡೆ ತಾಲ್ಲೂಕುಗಳನ್ನೊಳಗೊಂಡ ಚಿಕ್ಕಬಳ್ಳಾಪುರ ಜಿಲ್ಲೆಯನ್ನಾಗಿಯೂ ಹಾಗೂ ತತ್ಪರಿಣಾಮವಾಗಿ ಕೋಲಾರ ಜಿಲ್ಲೆಯನ್ನು ಶ್ರೀನಿವಾಸಪುರ, ಚಿಂತಾಮಣಿ, ಮಾಲೂರು, ಬಂಗಾರಪೇಟೆ, ಮುಳಬಾಗಿಲು ಮತ್ತು ಕೋಲಾರ ತಾಲ್ಲೂಕುಗಳಿಗೆ ಸೀಮಿತಗೊಳಿಸಲು; ಮತ್ತು ಶ್ರೀ ಪಿ.ಸಿ.ಗದ್ದಿಗೌಡರ್ ಸಮಿತಿಯ ಶಿಫಾರಸ್ಸಿನಂತೆ ಈಗಿನ ಬೆಳಗಾಂ ಮತ್ತು ಗುಲ್ಬರ್ಗಾ ಜಿಲ್ಲೆಗಳನ್ನು ಪುನರ್ವಿಂಗಡಿಸಿ ತಲಾ ಒಂದರಂತೆ ಎರಡು ಹೊಸ ಜಿಲ್ಲೆಗಳನ್ನು ರಚಿಸುವ ಬಗ್ಗೆ ಪುನರ್ ಪರಿಶೀಲಿಸಲು ತೀರ್ಮಾನಿಸಲಾಗಿದೆ.

ಪ್ರಸ್ತುತ ಕಾರ್ಯಕ್ಕೆ 3 ಜನ ಸದಸ್ಯರುಗಳ ಹಾಗೂ ಒಬ್ಬ ಅಧ್ಯಕ್ಷರನ್ನು ಹೊಂದಿದ ಒಟ್ಟು 4 ಜನರಿರುವ ಒಂದು ಸಮಿತಿಯನ್ನು ನೇಮಿಸಲು ಸರ್ಕಾರವು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಂಇ 27 ಭೂದಾಪು 2006,**
**ಬೆಂಗಳೂರು ದಿನಾಂಕ:21/02/2007.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಮೇರೆಗೆ, ಜಿಲ್ಲೆಗಳ ಪುನರ್ ವಿಂಗಡಣೆ ಹಾಗೂ ಹೊಸ ಜಿಲ್ಲೆಗಳ ರಚನೆ ಸಂಬಂಧ ಪರಿಶೀಲಿಸಲು ಸರ್ಕಾರವು

ಶ್ರೀ ವಿ.ಬಾಲಸುಬ್ರಮಣಿಯನ್, ನಿವೃತ್ತ ಐ.ಎ.ಎಸ್. ಅಧಿಕಾರಿ ಇವರ ಅಧ್ಯಕ್ಷತೆಯಲ್ಲಿ ಈ ಕೆಳಕಂಡ 3 ಸದಸ್ಯರನ್ನೊಳಗೊಂಡ ಜಿಲ್ಲಾ ಪುನರ್ವಿಂಗಡಣಾ ಸಮಿತಿಯನ್ನು ಈ ತಕ್ಷಣದಿಂದ ಜಾರಿಗೆ ಬರುವಂತೆ ರಚಿಸಲಾಗಿದೆ:-

1)ಶ್ರೀ ಕೆ.ವಿ.ಇರ್ನಿರಾಯರ್, ಐ.ಎ.ಎಸ್.(ನಿವೃತ್ತ) ಸದಸ್ಯರು

2)ಶ್ರೀ ಚಿರಂಜೀವಿ ಸಿಂಗ್, ಐ.ಎ.ಎಸ್.(ನಿವೃತ್ತ) ಸದಸ್ಯರು

3)ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಸದಸ್ಯ-ಕಾರ್ಯದರ್ಶಿ

ಈ ಸಮಿತಿಯ ವೆಚ್ಚಕ್ಕಾಗಿ ಅಗತ್ಯವಿರುವ ರೂ.10.00 ಲಕ್ಷಗಳನ್ನು ಮುಂದಿನ ಪೂರಕ ಅನುದಾನದಲ್ಲಿ ಒದಗಿಸಲಾಗುವುದು.

ಈ ಸಮಿತಿಯು ಒಟ್ಟಾರೆ 3 ತಿಂಗಳ ಕಾಲಾವಧಿಯಲ್ಲಿ ಈ ಕಾರ್ಯವನ್ನು ಪೂರ್ಣಗೊಳಿಸಿ ವರದಿಯನ್ನು ಸಲ್ಲಿಸುವಂತೆ ಕೋರಲಾಗಿದೆ.

ಸದರಿ ಸಮಿತಿಗೆ ಅಗತ್ಯವಾದ ಕಛೇರಿ, ದೂರವಾಣಿ, ವಾಹನ, ಅಗತ್ಯ ಸಿಬ್ಬಂದಿ ಹಾಗೂ ಲೇಖನ ಸಾಮಗ್ರಿಗಳನ್ನು ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ಅವರು ಒದಗಿಸುವುದು.

ಈ ಸಮಿತಿಯು ಸದರಿ ವಿಷಯಕ್ಕೆ ಸಂಬಂಧಪಟ್ಟಂತೆ ಪ್ರವಾಸ ಕೈಗೊಂಡಲ್ಲಿ, ಅಗತ್ಯವಾದ ವ್ಯವಸ್ಥೆಯನ್ನು ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ಅವರು ಮಾಡತಕ್ಕದ್ದು.

ಈ ಸಮಿತಿಯ ಅಧ್ಯಕ್ಷರು ಹಾಗೂ ಸದಸ್ಯರುಗಳು ಜಾರಿಯಲ್ಲಿರುವ ಸರ್ಕಾರದ ನಿಯಮಗಳಂತೆ ಪ್ರವಾಸ ಭತ್ಯೆ, ದಿನ ಭತ್ಯೆ, ಮತ್ತು ಇತರೆ ಭತ್ಯೆಗಳನ್ನು ಪಡೆಯಲು ಅರ್ಹರಿರುತ್ತಾರೆ. ಪ್ರಾದೇಶಿಕ ಆಯುಕ್ತರು, ಬೆಂಗಳೂರು ಇವರು ಈ ವೆಚ್ಚವನ್ನು ಸದರಿ ಸಮಿತಿಯ ವೆಚ್ಚಕ್ಕಾಗಿ ಬಿಡುಗಡೆ ಮಾಡಿರುವ ಹಣದಲ್ಲಿ ಭರಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಅ.ಟಿ. ಸಂ.ಆಇ 1131 ವೆಚ್ಚ 7/2006 ದಿನಾಂಕ:11-1-2007 ರ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಕೆ. ಪುರುಷೋತ್ತಮ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ (ಭೂಮಾಪನ).

ಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು.

ಪ್ರತಿಯನ್ನು:-